ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)
ತಹಶೀಲ್ದಾರರವರ ನ್ಯಾಯಾಲಯ ಕೂಡ್ಲಿಗಿ

ಸಂ/ಕಂ/ಪಹಣಿ:ವಿವಾದ/126/2013-14. ದಿನಾಂಕ: 08-06-2016.

| ವಾದಿಗಳು | ಪ್ರತಿವಾದಿಗಳು |
| --- | --- |
| ಜಿ.ಬಸವರಾಜ ತಂದೆ ಲೇಟ್ ಗಿರಿಮಳ್ಳಪ್ಪರ ಬಸಪ್ಪ<br>ಅಮ್ಮನಕೇರಿ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಕೂಡ್ಲಿಗಿ |
| ಕೂಡ್ಲಿಗಿ ತಾಲೂಕು ಅಮ್ಮನಕೇರಿ ಗ್ರಾಮದ ಸನಂ 126ಎ. ವಿಸ್ತೀರ್ಣ 2-04. ಎಕ್ರೆ ಜಮೀನನ್ನು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಅಮ್ಮನಕೇರಿ ಗ್ರಾಮದ ಸನಂ 126ಎ. ವಿಸ್ತೀರ್ಣ 2-04. ಎಕ್ರೆ ಜಮೀನನ್ನು ಸದರಿ ಗ್ರಾಮದ ಜಿ.ಬಸವರಾಜ ತಂದೆ ಲೇಟ್ ಗಿರಿಮಳ್ಳಪ್ಪರ ಬಸಪ್ಪ ಇವರು ದಿನಾಂಕ 26-08-2013 ರ ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಅಮ್ಮನಕೇರಿ ಇವರು ನಮೂನೆ-21 ರ ನೋಟಿಸನ್ನು ದಿನಾಂಕ 19-9-2013 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಪಾಲು ವಿಭಾಗದ ಪತ್ರ ನೊಂದಣಿ ಇಲ್ಲದ ಕಾರಣ ಹಾಗು ಮರಣ ಪ್ರಮಾಣ ಪತ್ರಗಳನ್ನು ಸಲ್ಲಿಸಿಲ್ಲದ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 05/2013-14.. ದಿನಾಂಕ 27-10-2013 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದೆಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸು ನೀಡಿ ದಿನಾಂಕ 24-12-2013 ರಿಂದ 08-06-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಗೂ ಅವರ ಪರ ನ್ಯಾಯಾವಾದಿಗಳು ಹಾಜರಾಗಿರುತ್ತಾರೆ. ಅರ್ಜಿದಾರರ ಪರ ನ್ಯಾಯಾವಾದಿಗಳು ಅಮ್ಮನಕೇರಿ ಗ್ರಾಮದ ಸನಂ 126ಎ. ವಿಸ್ತೀರ್ಣ 2-04 ಎಕ್ರೆ ಅರ್ಜಿದಾರರ ತಾಯಿಯವರಾದ ಬಸಮ್ಮ ಗಂಡ ಲೇಟ್ ಗಿರಿಮಳ್ಳಪ್ಪರ ಬಸಪ್ಪ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ತಮ್ಮ ಖಾಸಾ ಮಗನಾದ ಬಸವರಾಜ ತಂದೆ ಲೇಟ್ ಗಿರಿಮಳ್ಳಪ್ಪರ ಬಸಪ್ಪ ಇವರ ಹೆಸರಲ್ಲಿ ತಮ್ಮ ಸ್ವ ಇಚ್ಚೇಯಿಂದ ದಿನಾಂಕ 26-08-2013 ರಂದು ಪಾಲು ವಿಭಾಗದ ಪತ್ರ ಬರೆಯಿಸಿ ಕೊಟ್ಟಿರುತ್ತಾರೆ. ಕಾರಣ ಸದರಿ ಪಾಲು ವಿಭಾಗದ ಪತ್ರ ಪ್ರಕಾರ ಅರ್ಜಿದಾರರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಪರ ನ್ಯಾಯಾವಾದಿಗಳ ಹೇಳಿಕೆಗಳನ್ನು ಕೇಳಿ ಸದರಿ ಜಮೀನಿನ ಬಗ್ಗೆ ಕಂದಾಯ ಪರಿವೀಕ್ಷಕರು ಗ್ರಾಮದಲ್ಲಿ ಮರು ವಿಚಾರಣೆ ಮಾಡಲಾಗಿ ವಂಶವೃಕ್ಷದಲ್ಲಿನ ವಾರಸುದಾರರ

ಮರಣ ಪತ್ರಗಳನ್ನು ಅರ್ಜಿದಾರರು ಸಲ್ಲಿಸಿಲ್ಲವೆಂದು ವರದಿ ಸಲ್ಲಿಸಿರುತ್ತಾರೆ. ಹಾಗೂ ಸದರಿ ಪಾಲು ವಿಭಾಗದ ಪತ್ರದಲ್ಲಿ ಬಸಮ್ಮಳ ಸಹಿ ಇರುವುದಿಲ್ಲ ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

**-:ಆದೇಶ:-**

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಅಮ್ಮನಕೇರಿ ಗ್ರಾಮದ ಸನಂ 126ಎ. ವಿಸ್ತೀರ್ಣ 2-04. ಎಕ್ರೆ ಜಮೀನಿನ ಅರ್ಜಿದಾರರು ತಮ್ಮ ವಂಶವೃಕ್ಷದಲ್ಲಿನ ವಾರಸುದಾರರ ಮರಣ ಪ್ರಮಾಣ ಪತ್ರಗಳನ್ನು ಸಲ್ಲಿಸಿಲ್ಲದ ಕಾರಣ ಹಾಗೂ ಸೂಕ್ತ ದಾಖಲೆಗಳನ್ನು ಸಲ್ಲಿಸಿಲ್ಲದ ಕಾರಣ ಅರ್ಜಿದಾರರ ಕೋರಿಕೆಯನ್ನು ತಳ್ಳಿಹಾಕುತ್ತಾ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳೀ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 08-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು

ತಹಶೀಲ್ದಾರರು
ಕೂಡ್ಲಿಗಿ.

ಇದರ ಪ್ರತಿಯನ್ನು:

1) ಅರ್ಜಿದಾರರಾದ ಜಿ.ಬಸವರಾಜ ತಂದೆ ಲೇಟ್ ಗಿರಿಮಳ್ಳಪ್ಪರ ಬಸಪ್ಪ, ಅಮ್ಮನಕೇರಿ ಗ್ರಾಮ ಕೂಡ್ಲಿಗಿ ತಾಲೂಕು ಇವರ ಪರ ವಕೀಲರಾದ, ಟಿ.ಪಾಪಯ್ಯ ವಕೀಲರು ಕೂಡ್ಲಿಗಿ ಇವರ ದ್ವಾರ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಕೂಡ್ಲಿಗಿ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.

ತಹಶೀಲ್ದಾರರ ಕಾರ್ಯಾಲಯ
ಕೂಡ್ಲಿಗಿ. ಬಳ್ಳಾರಿ ಜಿಲ್ಲೆ.

**ದೃಢೀಕೃತ ನಕಲು**

ಶಿರಸ್ತೇದಾರರು
ತಾಲೂಕು ಕಛೇರಿ
ಕೂಡ್ಲಿಗಿ.